# National
# Kannada
# 12.04.2026 19.35 hrs
## ಆಕಾಶವಾಣಿ, ಬೆಂಗಳೂರು

## ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ನವದೆಹಲಿಯಲ್ಲಿ ನಾಳೆ ನಾರಿ ಶಕ್ತಿ ವಂದನ ಸಮ್ಮೇಳನ ಉದ್ದೇಶಿಸಿ ಪ್ರಧಾನಮಂತ್ರಿ ನರೇಂದ್ರ ಮೋದಿ ಭಾಷಣ
2. ಖ್ಯಾತ ಗಾಯಕಿ ಆಶಾ ಭೋಸ್ಲೆ ಅಸ್ತಂಗತ; ಗಣ್ಯರ ಸಂತಾಪ
3. ತಮಿಳುನಾಡು, ಗುಜರಾತ್, ಮಹಾರಾಷ್ಟ್ರ, ಪಶ್ಚಿಮ ಬಂಗಾಳದಲ್ಲಿ ರಂಗೇರಿದ ಚುನಾವಣಾ ಕಣ; ವಿವಿಧ ರಾಜಕೀಯ ಪಕ್ಷಗಳಿಂದ ಬಿರುಸಿನ ಪ್ರಚಾರ
4. ಬ್ಯಾಡ್ಮಿಂಟನ್ ಏಷ್ಯಾ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಆಯುಷ್‌ಶೆಟ್ಟಿಗೆ ರಜತ ಪದಕ
5. ಮುಂಬೈನಲ್ಲಿ ನಡೆಯುತ್ತಿರುವ ಐಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ಮುಖಾಮುಖಿ

***************

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನಾಳೆ ನವದೆಹಲಿಯಲ್ಲಿ ನಡೆಯಲಿರುವ ನಾರಿ ಶಕ್ತಿ ವಂದನ ಸಮ್ಮೇಳನ ಉದ್ದೇಶಿಸಿ ಮಾಡಲಿದ್ದಾರೆ. ಭಾರತದ ಅಭಿವೃದ್ಧಿ ಪಥವನ್ನು ರೂಪಿಸುವಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರ ಪಾಲ್ಗೊಳ್ಳುವಿಕೆ ಬಲಪಡಿಸಲು ರಾಷ್ಟ್ರ ಮಟ್ಟದ ಸಮ್ಮೇಳನ ಆಯೋಜಿಸಲಾಗಿದ್ದು, ಪಂಚಾಯತ್‌ಗಳಿಂದ ಸಂಸತ್ತಿನವರೆಗೆ ಎಲ್ಲಾ ಹಂತಗಳಲ್ಲಿ ಆಡಳಿತ ಮತ್ತು ನಾಯಕತ್ವದಲ್ಲಿ ಮಹಿಳೆಯರ ಪಾತ್ರ ವಿಸ್ತರಿಸುತ್ತಿರುವುದನ್ನು ಈ ಸಮ್ಮೇಳನ ಪ್ರದರ್ಶಿಸಲಿದೆ.

ಸರ್ಕಾರ, ಶೈಕ್ಷಣಿಕ, ವಿಜ್ಞಾನ, ಕ್ರೀಡೆ, ಉದ್ಯಮಶೀಲತೆ, ಮಾಧ್ಯಮ, ಸಾಮಾಜಿಕ ಕಾರ್ಯ, ಸಂಸ್ಕೃತಿ ಸೇರಿದಂತೆ ವಿವಿಧ ಕ್ಷೇತ್ರಗಳ ಮಹಿಳಾ ಸಾಧಕರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. 2047 ರ ವೇಳೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ಭಾರತದ ಪ್ರಯಾಣದಲ್ಲಿ ಮಹಿಳೆಯರ ಪಾತ್ರವನ್ನು ಸಮ್ಮೇಳನ ಪ್ರದರ್ಶಿಸಲಿದೆ.

ಶಾಸಕಾಂಗದಲ್ಲಿ ಮಹಿಳಾ ಪ್ರಾತಿನಿಧ್ಯವನ್ನು ಹೆಚ್ಚಿಸಲು ಸೆಪ್ಟೆಂಬರ್ 2023 ರಲ್ಲಿ ಸಂಸತ್ತು 'ನಾರಿ ಶಕ್ತಿ ವಂದನ ಅಧಿನಿಯಮ' ಅಂಗೀಕರಿಸಿತು. ಲೋಕಸಭೆ ಮತ್ತು ರಾಜ್ಯ ಶಾಸಕಾಂಗ ಸಭೆಗಳಲ್ಲಿ ಮಹಿಳೆಯರಿಗೆ ಮೂರನೇ ಒಂದು ಭಾಗದಷ್ಟು ಸ್ಥಾನಗಳನ್ನು ಕಾಯ್ದಿರಿಸಲು ಈ ಕಾಯ್ದೆ ಅವಕಾಶ ನೀಡಿದೆ. ದೇಶಾದ್ಯಂತ ಮಹಿಳಾ ಮೀಸಲಾತಿ ಅನುಷ್ಠಾನವನ್ನು ಕೇಂದ್ರೀಕರಿಸಿ, ಈ ತಿಂಗಳ 16 ರಿಂದ ಸಂಸತ್ತಿನ ಅಧಿವೇಶನ ನಡೆಯಲಿದೆ.

***************

ಖ್ಯಾತ ಗಾಯಕಿ, ಪದ್ಮವಿಭೂಷಣ ಪುರಸ್ಕೃತರಾದ ಡಾ. ಆಶಾ ಭೋಸ್ಲೆ ಇಂದು ಮುಂಬೈನಲ್ಲಿ ಹೃದಯಾಘಾತದಿಂದ ನಿಧನರಾದರು. ಅವರಿಗೆ 93 ವರ್ಷ ವಯಸ್ಸಾಗಿತ್ತು.

ಆಶಾ ಭೋಸ್ಲೆ ಅವರು ವಿವಿಧ ಸಂಗೀತ ಪ್ರಕಾರಗಳಲ್ಲಿ ತಮ್ಮ ಗಾನ ಮಾಧುರ್ಯದ ಮೂಲಕ ಮೋಡಿ ಮಾಡಿದ್ದರು. ಅವರ ಅಂತ್ಯಕ್ರಿಯೆ ನಾಳೆ ಸಂಜೆ 4 ಗಂಟೆಗೆ ಮುಂಬೈನ ಶಿವಾಜಿ ಪಾರ್ಕ್‌ನಲ್ಲಿ ನಡೆಯಲಿದೆ.

ಆಶಾ ಭೋಸ್ಲೆ ಅವರ ನಿಧನಕ್ಕೆ ಗಣ್ಯರು ಸಂತಾಪ ಸೂಚಿಸಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಮಂತ್ರಿ ನರೇಂದ್ರ ಮೋದಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ, ಗೃಹ ಸಚಿವ ಡಾ. ಜಿ. ಪರಮೇಶ್ವರ್, ಮಹಾರಾಷ್ಟ್ರ ರಾಜ್ಯಪಾಲ ಜಿಷ್ಣು ದೇವ್ ವರ್ಮಾ, ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ದುಃಖ ವ್ಯಕ್ತಪಡಿಸಿದ್ದಾರೆ. ಖ್ಯಾತ ಗಾಯಕರು, ದಿಗ್ಗಜ ನಟರು ಸೇರಿದಂತೆ ಚಲನಚಿತ್ರ ಮತ್ತು ಸಂಗೀತ ಜಗತ್ತಿನ ಅನೇಕರು ಅವರ ನಿಧನಕ್ಕೆ ಕಂಬನಿ ಮಿಡಿದಿದ್ದಾರೆ.

***************

ದೇಶದಲ್ಲಿ ಅಡುಗೆ ಅನಿಲ ಸಿಲಿಂಡರ್ ವಿತರಣೆ ಸಾಮಾನ್ಯವಾಗಿದ್ದು ನಿನ್ನೆ ಒಂದೇ ದಿನ 52 ಲಕ್ಷಕ್ಕೂ ಹೆಚ್ಚು ಸಿಲಿಂಡರ್ ಗಳನ್ನು ವಿತರಿಸಲಾಗಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ತಿಳಿಸಿದೆ.

ಅಕ್ರಮ ಸಂಗ್ರಹ ಮತ್ತು ಮಾರಾಟ ತಡೆಗಟ್ಟಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗಿದ್ದು, ದೇಶಾದ್ಯಂತ 700 ದಾಳಿ ಮಾಡಲಾಗಿದೆ.

ಸಾರ್ವಜನಿಕ ವಲಯ ಘಟಕದ ತೈಲ ಮಾರುಕಟ್ಟೆ ಕಂಪೆನಿಗಳು ದಿಢೀರ್ ಭೇಟಿ ಕೈಗೊಂಡು 219 ವಿತರಕರಿಗೆ ದಂಡ ವಿಧಿಸಿದೆ ಎಂದು ಸಚಿವಾಲಯ ತಿಳಿಸಿದೆ.

***************

ಹಣಕಾಸು ವರ್ಷ 2025 ರಲ್ಲಿ ಭಾರತದ ಪೇಟೆಂಟ್ ಅರ್ಜಿಗಳು ಒಂದು ಲಕ್ಷ 43 ಸಾವಿರ ದಾಟಿದ್ದು, ಇದು ಹಿಂದಿನ ವರ್ಷಕ್ಕಿಂತ ಶೇಕಡ 30 ರಷ್ಟು ಹೆಚ್ಚು  ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ.

ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಇಂದು ಅವರು, ತಮಿಳುನಾಡು, ಕರ್ನಾಟಕ ಮತ್ತು ಮಹಾರಾಷ್ಟ್ರದಿಂದ ಸಲ್ಲಿಕೆಯಾರುವ ಪೇಟೆಂಟುಗಳು ಶೇಕಡ 69ರಷ್ಟಿದ್ದು, ಭಾರತವು ವಿಶ್ವದ 6ನೇ ಅತಿದೊಡ್ಡ ಪೇಟೆಂಟ್ ಸಲ್ಲಿಸುವ ದೇಶವಾಗಿದೆ ಎಂದು ಹೇಳಿದ್ದಾರೆ.

***************

ಪ್ರಧಾನಮಂತ್ರಿ ಗತಿ ಶಕ್ತಿ ರಾಷ್ಟ್ರೀಯ ಮಾಸ್ಟರ್ ಪ್ಲಾನ್ ಅಡಿ ಭಾರತೀಯ ರೈಲ್ವೆ 2025-26 ನೇ ಸಾಲಿಗೆ 1.53 ಲಕ್ಷಕ್ಕೂ ಹೆಚ್ಚು ಹೂಡಿಕೆಯೊಂದಿಗೆ ರೈಲ್ವೆ ಜಾಲ ವಿಸ್ತರಣೆ ಕೈಗೊಳ್ಳುತ್ತಿದೆ. ಇದರಡಿ 6 ಸಾವಿರಕ್ಕೂ ಹೆಚ್ಚು ಕಿಲೊ ಮೀಟರ್ ಉದ್ದದ ರೈಲ್ವೆ ಜಾಲ ವಿಸ್ತರಣೆ ಗುರಿ ಹೊಂದಲಾಗಿದೆ. ಕಳೆದ ವಿತ್ತೀಯ ವರ್ಷಕ್ಕೆ ಹೋಲಿಸಿದಲ್ಲಿ ಈ ವಿಸ್ತರಣೆ 110 ಪಟ್ಟು ಹೆಚ್ಚಾಗಿದೆ ಎಂದು ರೈಲ್ವೇ ಸಚಿವಾಲಯ ತಿಳಿಸಿದೆ.
ಅಭಿವೃದ್ಧಿ, ರಾಷ್ಟ್ರೀಯ ಐಕ್ಯತೆ ಮತ್ತು ಕೊನೆ ಮೈಲಿವರೆಗೂ ಸಂಪರ್ಕ ಕಲ್ಪಿಸುವುದರ ಮೇಲೆ ಗಮನ ಕೇಂದ್ರೀಕರಿಸಿ 2025-26 ರ ಅವಧಿಗೆ ಹೊಸ ರೈಲ್ವೇ ಮಾರ್ಗ, ಜೋಡಿಹಳಿ, ಬಹುಹಳಿ ಮತ್ತು ಇತರೆ ಕೆಲಸಗಳಿಗೆ ಮಂಜೂರಾತಿ ದೊರೆತಿದೆ ಎಂದು ಸಚಿವಾಲಯ ಹೇಳಿದೆ.
ಮಹಾರಾಷ್ಟ್ರ, ಬಿಹಾರ್, ಜಾರ್ಖಂಡ್ ಮತ್ತು ಮಧ್ಯ ಪ್ರದೇಶ ಸೇರಿದಂತೆ ಎಲ್ಲ ಪ್ರಮುಖ ರಾಜ್ಯಗಳಲ್ಲಿ ಈ ರೈಲ್ವೆ ವಿಸ್ತರಣಾ ಕಾರ್ಯಕ್ರಮ ಕಾಮಗಾರಿ ನಡೆಯಲಿವೆ.

***************

ತಮಿಳುನಾಡು, ಗುಜರಾತ್ ಮತ್ತು ಮಹಾರಾಷ್ಟ್ರದಲ್ಲಿ ಈ ತಿಂಗಳ 23 ರಂದು ಒಂದೇ ಹಂತದಲ್ಲಿ ಹಾಗೂ ಪಶ್ಚಿಮ ಬಂಗಾಳದಲ್ಲಿ ಅದೇ ದಿನದಂದು ಮೊದಲ ಹಂತದ ವಿಧಾನಸಭಾ ಚುನಾವಣೆಗೆ ಮತದಾನ ನಿಗದಿಯಾಗಿದ್ದು, ವಿವಿಧ ರಾಜಕೀಯ ಪಕ್ಷಗಳು ಬಿರುಸಿನ ಪ್ರಚಾರ ಕೈಗೊಂಡಿವೆ.
ಬಿಜೆಪಿಯ ಹಿರಿಯ ನಾಯಕ ಮತ್ತು ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಪಶ್ಚಿಮ ಬಂಗಾಳದ ಸಿಲಿಗುರಿಯಲ್ಲಿ ಸಾರ್ವಜನಿಕ ರ್‍ಯಾಲಿ ಉದ್ದೇಶಿಸಿ ಮಾತನಾಡಿದರು.
ತಮಿಳುನಾಡಿನಲ್ಲಿಂದು ಬಿಜೆಪಿ ಮುಖ್ಯಸ್ಥರು ವಿರುಧುನಗರದಲ್ಲಿ ಪ್ರಚಾರ ನಡೆಸಿದರೆ, ಮಾಜಿ ಸಂಸದ ನಟ ಶರತ್ ಕುಮಾರ್ ಸತ್ತೂರಿನಲ್ಲಿ ರೋಡ್ ಶೋ ನಡೆಸಿದರು. ಎಐಎಡಿಎಂಕೆ, ಪಿಎಂಕೆ ಮತ್ತು ಎನ್‌ಡಿಎ ಮೈತ್ರಿಕೂಟದ ಪಕ್ಷದ ಸದಸ್ಯರು ರೋಡ್ ಶೋನಲ್ಲಿ ಭಾಗಿಯಾದರು. ಡಿಎಂಕೆ ಮುಖ್ಯಸ್ಥ ಮತ್ತು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ಪರಮಕುಡಿಯಲ್ಲಿ ಪಕ್ಷದ ಅಭ್ಯರ್ಥಿಗಳ ಪರ ಮತಯಾಚಿಸಿದರು.  ತಮಿಳಗ ವೆಟ್ರಿ ಕಳಗಂ ಪಕ್ಷದ ಅಭ್ಯರ್ಥಿಗಳ ಪರವಾಗಿ ಪಕ್ಷದ ನಾಯಕ ಸೀಮನ್ ಕನ್ಯಾಕುಮಾರಿಯಲಿ ರೋಡ್ ಶೋನಲ್ಲಿ ಭಾಗವಹಿಸಿದ್ದಾರೆ.
ಗುಜರಾತ್ ಮತ್ತು ಮಹಾರಾಷ್ಟ್ರಗಳಲ್ಲೂ ಚುನಾವಣಾ ಕಣ ರಂಗೇರಿದ್ದು, ವಿವಿಧ ರಾಜಕೀಯ ಪಕ್ಷಗಳ ನಾಯಕರು ತಮ್ಮ ತಮ್ಮ ಅಭ್ಯರ್ಥಿಗಳ ಪರ ಪ್ರಚಾರ ನಡೆಸಿದರು.

***************

ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಅವರು ಅಬುಧಾಬಿಯಲ್ಲಿ ಇಂದು ಯುಎಇ ಅಧ್ಯಕ್ಷ ಮೊಹಮ್ಮದ್ ಬಿನ್ ಜಾಯೆದ್ ಅಲ್ ನಹ್ಯಾನ್ ಅವರನ್ನು ಭೇಟಿ ಮಾಡಿದರು.
ಪಶ್ಚಿಮ ಏಷ್ಯಾ ಸಂಘರ್ಷದ ಸಂದರ್ಭದಲ್ಲಿ ಭಾರತೀಯ ಸಮುದಾಯದ ಯೋಗಕ್ಷೇಮವನ್ನು ಖಾತ್ರಿಪಡಿಸಿದ್ದಕ್ಕಾಗಿ ಪ್ರಧಾನಮಂತ್ರಿ ನರೇಂದ್ರ ಮೋದಿ ಮತ್ತು ನಾಗರಿಕರ ಪರವಾಗಿ ಕೃತಜ್ಞತೆ ವ್ಯಕ್ತಪಡಿಸಿದರು.
ಭಾರತ-ಯುಎಇ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಕುರಿತು ಮಾರ್ಗದರ್ಶನಕ್ಕಾಗಿ ವಿದೇಶಾಂಗ ವ್ಯವಹಾರಗಳ ಸಚಿವರು ಯುಎಇ ಅಧ್ಯಕ್ಷರಿಗೆ ಧನ್ಯವಾದ ಅರ್ಪಿಸಿದರು.

***************

ಅಮೆರಿಕ ಉಪಾಧ್ಯಕ್ಷ ಜೆ.ಡಿ. ವ್ಯಾನ್ಸ್ ನೇತೃತ್ವದ ನಿಯೋಗ ಮತ್ತು ಇರಾನ್‌ನ ನಿಯೋಗ ಒಪ್ಪಂದಕ್ಕೆ ಬರಲು ವಿಫಲವಾದ ನಂತರ ಇಸ್ಲಾಮಾಬಾದ್‌ನಿಂದ ನಿರ್ಗಮಿಸಿದೆ.

ಪರಮಾಣು ಶಸ್ತ್ರಾಸ್ತ್ರ ತಯಾರಿಸಬಾರದು ಎಂಬ ಷರತ್ತಿಗೆ ಇರಾನ್ ಸಮ್ಮತಿಸದಿರುವುದೂ ಸೇರಿದಂತೆ ಶಾಂತಿ ಮಾತುಕತೆಯಲ್ಲಿ ಒಮ್ಮತ ಸಾಧ್ಯವಾಗಲಿಲ್ಲ ಎಂದು ಅಮೆರಿಕ ಉಪಾಧ್ಯಕ್ಷರು ಹೇಳಿದ್ದಾರೆ.

ಇರಾನ್ ನೊಂದಿಗಿನ ಸಂಘರ್ಷ ಫೆಬ್ರವರಿ ಅಂತ್ಯದಲ್ಲಿ ಪ್ರಾರಂಭವಾಗಿದ್ದು, ಎರಡೂ ದೇಶಗಳ ನಾಯಕರು ಸುಮಾರು 21 ಗಂಟೆಗಳ ಕಾಲ ವ್ಯಾಪಕ ಚರ್ಚೆಗಳನ್ನು ನಡೆಸಿದ್ದರು. ಸಂಧಾನಕ್ಕಾಗಿ ಏಪ್ರಿಲ್ 8 ರಂದು ಎರಡು ವಾರಗಳ ಕದನ ವಿರಾಮಕ್ಕೆ ಸಮ್ಮತಿಸಲಾಗಿತ್ತು, ಆದರೆ ಈಗ ಒಪ್ಪಂದವಿಲ್ಲದೆ ಮಾತುಕತೆ ಮುಕ್ತಾಯಗೊಂಡಿದೆ.

***************

ದೇಶದ ಭಾಗವಾಗಿರುವ ಸ್ಥಳಗಳಿಗೆ 'ಕಾಲ್ಪನಿಕ ಹೆಸರುಗಳನ್ನು' ನೀಡುವ ಚೀನಾದ ಪ್ರಯತ್ನಗಳನ್ನು ಭಾರತ ಭಾನುವಾರ ತಿರಸ್ಕರಿಸಿದ್ದು, ಅರುಣಾಚಲ ಪ್ರದೇಶ ಸೇರಿದಂತೆ ದೇಶದ ಭಾಗಗಳು ಭಾರತದ ಅವಿಭಾಜ್ಯ ಅಂಗ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ವಕ್ತಾರ ರಣಧೀರ್ ಜೈಸ್ವಾಲ್ ಪುನರುಚ್ಚರಿಸಿದ್ದಾರೆ.
ಈ ಬಗ್ಗೆ ಮಾಧ್ಯಮ ಪ್ರಶ್ನೆಗಳಿಗೆ ಪ್ರತಿಕ್ರಿಯೆ ನೀಡಿರುವ ಅವರು, ಭಾರತದ ಭೂಪ್ರದೇಶದ ಭಾಗವಾಗಿರುವ ಸ್ಥಳಗಳಿಗೆ ಕಾಲ್ಪನಿಕ ಹೆಸರುಗಳನ್ನು ನೀಡುವ ಚೀನಾದ ಪ್ರಯತ್ನಗಳನ್ನು ಭಾರತ ತಿರಸ್ಕರಿಸುತ್ತದೆ ಎಂದರು.

***************

ಚೀನಾದ ನಿಂಗ್ಬೋದಲ್ಲಿ ಇಂದು ನಡೆದ ಬ್ಯಾಡ್ಮಿಂಟನ್ ಏಷ್ಯಾ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಆಯುಷ್ ಶೆಟ್ಟಿ ಬೆಳ್ಳಿ ಪದಕ ಗೆದ್ದಿದ್ದಾರೆ. ಫೈನಲ್ ನಲ್ಲಿ ಚೀನಾದ ಶಿ ಯುಕಿ ವಿರುದ್ಧ 8-21, 10-21 ಅಂತರದಲ್ಲಿ ಪರಾಭವಗೊಂಡು ರನ್ನರ್ ಅಪ್ ಆದರು.
ಬ್ಯಾಡ್ಮಿಂಟನ್ ಏಷ್ಯಾ ಚಾಂಪಿಯನ್‌ಶಿಪ್‌ನಲ್ಲಿ 61 ವರ್ಷಗಳಲ್ಲಿ ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಭಾರತಕ್ಕೆ ಲಭಿಸಿರುವ ಮೊದಲ ರಜತ ಪದಕ ಇದಾಗಿದೆ.

***************

ಉತ್ತರ ಪ್ರದೇಶದಲ್ಲಿ ನಡೆಯುತ್ತಿರುವ ಐಪಿಎಲ್ ಟಿ-20 ಕ್ರಿಕೆಟ್ ಪಂದ್ಯದಲ್ಲಿ ಗುಜರಾತ್ ಟೈಟನ್ಸ್ ತಂಡ 7 ವಿಕೆಟ್‌ಗಳ ಜಯ ಸಾಧಿಸಿದೆ.
ಲಖನೌ ಸೂಪರ್ ಜೈಂಟ್ಸ್ ತಂಡ ನೀಡಿದ 165 ರನ್‌ಗಳ ಗುರಿ ಬೆನ್ನತ್ತಿರುವ ಗುಜರಾತ್ ಟೈಟನ್ಸ್ ತಂಡ, 18.4 ಓವರ್‌ಗಳಲ್ಲಿ 3 ವಿಕೆಟ್ ನಷ್ಟಕ್ಕೆ ಗುರಿ ತಲುಪಿತು.
ಮುಂಬೈನಲ್ಲಿ ನಡೆಯುತ್ತಿರುವ ಮತ್ತೊಂದು ಐಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ಮುಖಾಮುಖಿಯಾಗಿವೆ.
ಟಾಸ್ ಗೆದ್ದ ಮುಂಬೈ ಇಂಡಿಯನ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದ್ದು, ಯಾವುದೇ ವಿಕೆಟ್ ನಷ್ಟಕ್ಕೆ 26 ರನ್ ಗಳಿಸಿದೆ.

*******ಮುಕ್ತಾಯ*******